ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಛೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003**

# ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9–ನೇಮಕಾತಿ–ವಿವ–4/2015–16 ದಿನಾಂಕ: 28.03.2016 ಮತ್ತು ಬಿ9–ನೇಮಕಾತಿ–ವಿವ–3/2015–16 ದಿನಾಂಕ: 23.03.2016**

## 460 ಉಪ ವಲಯ ಅರಣ್ಯಾಧಿಕಾರಿ ಹಾಗೂ 555 ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ

* * * * *

460 ಉಪ ವಲಯ ಅರಣ್ಯಾಧಿಕಾರಿ ಹಾಗೂ 555 ಅರಣ್ಯ ರಕ್ಷಕ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಈಗಾಗಲೇ 395 ಉಪ ವಲಯ ಅರಣ್ಯಾಧಿಕಾರಿಗಳ ಹಾಗೂ 416 ಅರಣ್ಯ ರಕ್ಷಕ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಹಾಗೂ ಸ್ಥಳ ಹಂಚಿಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಈಗಾಗಲೇ ಅರಣ್ಯ ರಕ್ಷಕ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗಿ ವೃತ್ತಿ ತರಬೇತಿಯಲ್ಲಿರುತ್ತಾರೆ. ಉಪ ವಲಯ ಅರಣ್ಯಾಧಿಕಾರಿ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಸದ್ಯದಲ್ಲಿಯೇ ನೇಮಕಾತಿ ಆದೇಶ ನೀಡಲಾಗುವುದು ಹಾಗೂ ಸದ್ಯದಲ್ಲಿಯೇ ವೃತ್ತಿ ತರಬೇತಿಗೆ ನಿಯೋಜಿಸಲಾಗುವುದು.

ಅರಣ್ಯ ರಕ್ಷಕ ಹಾಗೂ ಉಪ ವಲಯ ಅರಣ್ಯಾಧಿಕಾರಿ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಪೈಕಿ ಈ ವರೆಗೆ ಸಂಬಂಧಿಸಿದ ಪ್ರಾಧಿಕಾರದ ಮುಂದೆ ಹಾಜರಾಗದೆ ಇರುವ ಅಭ್ಯರ್ಥಿಗಳು ದಿನಾಂಕ: 17.07.2017 ರೊಳಗಾಗಿ ಹಾಜರಾಗುವುದು. ಸದರಿ ದಿನಾಂಕದೊಳಗೆ ಹಾಜರಾಗದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

ಅರಣ್ಯ ರಕ್ಷಕ ಹುದ್ದೆಗೆ ಭರ್ತಿ ಮಾಡಲು ಬಾಕಿ ಇರುವ ಹುದ್ದೆಗಳನ್ನು ಸದ್ಯದಲ್ಲಿಯೇ ಭರ್ತಿ ಮಾಡಲಾಗುವುದು ಹಾಗೂ ಈ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿ, ವೃತ್ತಿ ತರಬೇತಿಗೆ ಸದ್ಯದಲ್ಲಿಯೇ ನಿಯೋಜಿಸಲಾಗುವುದು.

ಬೆಂಗಳೂರು
ದಿನಾಂಕ: 07–07–2017

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)